ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 25ನೇ ನವೆಂಬರ್, 2016

(ಸಮಯ ಬೆಳಗ್ಗೆ : 10.00 ಗಂಟೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

ಆ) ದಿನಾಂಕ:23.11.2016ರ 3ನೇ ಪಟ್ಟಿಯಿಂದ ವರ್ಗಾವಣೆಗೊಂಡಿರುವ ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 31(574). : ಕೃಷಿ ಸಚಿವರು

ಇ) ದಿನಾಂಕ:23.11.2016ರ 3ನೇ ಪಟ್ಟಿಯಿಂದ ವರ್ಗಾವಣೆಗೊಂಡಿರುವ ಶ್ರೀ ಕೆ. ಗೋಪಾಲಯ್ಯ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 38(397). : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆ ರಾಜ್ಯ ಸಚಿವರು

ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಎರಡನೇ ಪಟ್ಟಿಯ ರೀತ್ಯಾ.

3. ಮಹದಾಯಿ ಕಳಸಾ ಬಂಡೂರಿ ನಾಲಾ ಯೋಜನೆ ಕುರಿತು ವಿಶೇಷ ಚರ್ಚೆ ಹಾಗೂ ಸರ್ಕಾರದ ಉತ್ತರ

......2

4. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1 **ಶ್ರೀ ಕೆ.ಆರ್. ರಮೇಶ್ ಕುಮಾರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಅವರು:-**

ಅ) 2016ನೇ ಸಾಲಿನ ಕರ್ನಾಟಕ ಆಯುರ್ವೇದ, ಪ್ರಕೃತಿ ಚಿಕಿತ್ಸೆ, ಸಿದ್ಧ, ಯುನಾನಿ ಮತ್ತು ಯೋಗ ವೈದ್ಯ ವೃತ್ತಿ ನಿರತರ ನೋಂದಣಿ ಮತ್ತು ವೈದ್ಯಕೀಯ ವೃತ್ತಿನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2 **ಶ್ರೀ ಬಸವರಾಜ ರಾಯರೆಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು:-**

ಅ) 2016ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3 **ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರು) ಅವರು:-**

ಅ) 2016ನೇ ಸಾಲಿನ ಕರ್ನಾಟಕ ಕೆಲವು ಸ್ಥಳಗಳ ಹೆಸರುಗಳನ್ನು ಬದಲಾಯಿಸುವ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4 **ಶ್ರೀ ಕೆ.ಜೆ. ಜಾರ್ಜ್ (ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು)ಅವರು:-**

ಅ) 2016ನೇ ಸಾಲಿನ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5 **ಶ್ರೀ ಬಿ. ರಮಾನಾಥ ರೈ (ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು) ಅವರು:-**

ಅ) 2016ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಅರಣ್ಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ಹಾಗೂ ಸ್ಥಳನಿಯುಕ್ತಿಗಳ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

೫. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ರಾಜ್ಯದಲ್ಲಿ ಕಂದಾಯ ಇಲಾಖೆಯಲ್ಲಿ ಗ್ರಾಮ ಸಹಾಯಕರನ್ನು ಖಾಯಂಗೊಳಿಸಿ "ಡಿ" ದರ್ಜೆ ನೌಕರರೆಂದು ಪರಿಗಣಿಸಿ ಸೌಲಭ್ಯ ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2. **ಶ್ರೀ ಎಂ.ಜೆ. ಅಪ್ಪಾಜಿ ಅವರು** – ಸ್ವ-ಇಚ್ಛೆಯಿಂದ ನಿವೃತ್ತಿ (ವಿ.ಆರ್.ಎಸ್) ಪಡೆಯಲಿಚ್ಛಿಸುವ ಎಂ.ಪಿ.ಎಂ ಕಾರ್ಖಾನೆಯ ನೌಕರರಿಗೆ ಬಾಕಿಯಿರುವ ಭತ್ಯೆಗಳ ಸಹಿತ ನಿವೃತ್ತಿ ಹೊಂದಲು ಅನುಮತಿ ನೀಡುವ ಹಾಗೂ ಕಾರ್ಖಾನೆಯನ್ನು ಪುನರಾರಂಭಿಸಿ, ಕಾನೂನು ಬಾಹಿರವಾಗಿ ಹೊರ ಹಾಕಿರುವ ಕಾರ್ಮಿಕರುಗಳನ್ನು ಮರುನೇಮಕಗೊಳಿಸುವ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

3. **ಶ್ರೀ ಜೆ.ಟಿ. ಪಾಟೀಲ್ ಅವರು** – ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ E-tradingನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ರೈತರಿಗೆ ಸಕಾಲದಲ್ಲಿ E-payment ಜಾರಿ ಮಾಡುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

4. **ಶ್ರೀ ಕೆ.ಜಿ. ಬೋಪಯ್ಯ ಅವರು** – ಕೊಡಗು ಜಿಲ್ಲೆಯಲ್ಲಿ 2 ಎಕರೆಗೆ ಒಳಪಟ್ಟ ಸಣ್ಣ ಹಾಗೂ ಅತಿ ಸಣ್ಣ ಕಾಫಿ ಬೆಳೆಗಾರರಿಗೆ ಅಗತ್ಯ ದೃಢೀಕರಣ ಪತ್ರ ನೀಡದಿರುವುದರಿಂದ, ಅವರು ಸರ್ಕಾರಿ ಸೌಲಭ್ಯದಿಂದ ವಂಚಿತರಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5. **ಶ್ರೀ ಎಸ್.ಆರ್. ವಿಶ್ವನಾಥ್ ಅವರು** – ಬಿ.ಬಿ.ಎಂ.ಪಿ ವ್ಯಾಪ್ತಿಗೆ ಹೊಸದಾಗಿ ಸೇರ್ಪಡೆಗೊಂಡಿರುವ 110 ಹಳ್ಳಿಗಳಿಗೆ ಕಾವೇರಿ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಶೀಘ್ರವಾಗಿ ಕಲ್ಪಿಸುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

ಎಸ್.ಮೂರ್ತಿ
ಕಾರ್ಯದರ್ಶಿ (I/C)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm